ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಹೆಗ್ಗಡದೇವನ ಕೋಟೆ ಸಾರ್ವಜನಿಕ ಆಸ್ಪತ್ರೆಯ ಜಾಗ ಒತ್ತುವರಿ ಬಗ್ಗೆ

ಶ್ರೀ ಎಸ್.ನಾಗರಾಜ್ (ಸಂದೇಶ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

108 (46) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೆಗ್ಗಡದೇವನಕೋಟೆ ಸಾರ್ವಜನಿಕ ಆಸ್ಪತ್ರೆಯ ಜಾಗದ ವಿಸ್ತೀರ್ಣ ಎಷ್ಟು; ಇದರಲ್ಲಿ ಎಷ್ಟು ಒತ್ತುವರಿ ಆಗಿದೆ; ಒತ್ತುವರಿ ಆಗಿರುವ ಜಾಗದ ಪೈಕಿ ಎಷ್ಟು ಜಾಗವನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ; ಇನ್ನೂ ತೆರವುಗೊಳಿಸಬೇಕಾಗಿರುವ ಜಾಗದ ವಿಸ್ತೀರ್ಣ ಎಷ್ಟು;

(ಆ) ಹೆಗ್ಗಡದೇವನ ಕೋಟೆ ಸಾರ್ವಜನಿಕ ಆಸ್ಪತ್ರೆಗೆ ಮಂಜೂರಾಗಿರುವ ಜಾಗವನ್ನು ಸಮಗ್ರವಾಗಿ ಸರ್ವೇ ಮಾಡಿಸಿ ಒತ್ತುವರಿ ಜಾಗವನ್ನು ಪೂರ್ಣವಾಗಿ ತೆರವುಗೊಳಿಸಿ, ಕಂಪೌಂಡ್ ನಿರ್ಮಾಣ ಮಾಡಿ, ಆವರಣವನ್ನು ಸ್ವಚ್ಛವಾಗಿಡಲು ಕ್ರಮ ಜರುಗಿಸಲಾಗುವುದೇ?